ಆ) ಹಾಗಿದ್ದಲ್ಲಿ ಯಾವಾಗ ನಿರ್ಮಾಣ ಮಾಡಲಾಗುವುದು ಇದಕ್ಕೆ ತಗಲುವ ವೆಚ್ಚವೆಷ್ಟು? ಸದರಿ ಕಾರ್ಯದ ರೂಪರೇಷೆಗಳೇನು? ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗುವುದು (ವಿವರ ನೀಡುವುದು.)

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು)

ಅ) ಪರಿಶೀಲನೆಯಲ್ಲಿದೆ.

ಆ) ಮಿನಿ ಅಂಬೇಡ್ಕರ್ ಭವನಗಳ ಘಟಕ ವೆಚ್ಚವನ್ನು ರೂ. 3.00 ಲಕ್ಷಗಳಿಂದ ರೂ. 5.00ಲಕ್ಷಗಳಿಗೆ ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದ್ದು, ಈ ಬಗ್ಗೆ ತೀರ್ಮಾನ ಕೈಗೊಂಡ ನಂತರ ಮಾಗಡಿ ತಾಲ್ಲೂಕಿನಲ್ಲಿ ಅಂಬೇಡ್ಕರ್ ಭವನವನ್ನು ನಿರ್ಮಿಸುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಪರಿಶಿಷ್ಟ ಜಾತಿ ಹಾಗೂ ವರ್ಗಗಳ ಅಭಿವೃದ್ಧಿ ನಿಗಮದಿಂದ ಕೈಗೊಂಡಿರುವ ಕೊಳವೆಬಾವಿ ಯೋಜನೆಗಳು

97 (115)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ, ವೈಯಕ್ತಿಕ ಕೊಳವೆಬಾವಿ ಯೋಜನೆಗಳಲ್ಲಿ ಕೊಳವೆಬಾವಿ ಕೊರೆಯುವ ಕೆಲಸ ನಿಲ್ಲಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಇದನ್ನು ಪ್ರಾರಂಭಿಸಲು ಸರ್ಕಾರದವರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಮಾನ್ಯ ಸಮಾಜ ಕಲ್ಯಾಣ ಸಚಿವರು):

ಅ) ಬಂದಿದೆ. ಈಗಾಗಲೇ ಕೊರೆದಿರುವ 9547 ಕೊಳವೆಬಾವಿಗಳಲ್ಲಿ ವಿದ್ಯುದ್ದೀಕರಣ ಪ್ರಗತಿ ಆಗುವವರೆಗೂ ಈ ಕಾರ್ಯಕ್ರಮಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದ್ದು, ವಿದ್ಯುದ್ದೀಕರಣ ಪ್ರಗತಿ ಉತ್ತಮವಾದ ಕೂಡಲೇ ಕೊಳವೆಬಾವಿಗಳನ್ನು ಕೊರೆಯುವ ಕಾರ್ಯವನ್ನು ಪ್ರಾರಂಭಿಸಲಾಗುವುದು.

ಸೂರತ್ಕಲ್ ವಿಧಾನಸಭಾ ಕ್ಷೇತ್ರದಲ್ಲಿನ ಪರಿಶಿಷ್ಟ ಜಾತಿಯವರ ಕಾಲೋನಿಗಳಿಗೆ ಕನಿಷ್ಟ ಸೌಲಭ್ಯ.

98 (227)